Akashvani : Bangalore
National Bulletin In Kannada
01.10.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
01.10.2024 : 7.35AM

*******

ಮುಖ್ಯಾಂಶಗಳು :

1. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರಮೋದಿ ಹಾಗೂ ಜಮೈಕಾ ಪ್ರಧಾನಿ ಡಾ. ಆಂಡ್ರ್ಯೂ ಹೋಲ್ನೆಸ್ ನಿಯೋಗ ಮಟ್ಟದ ಮಾತುಕತೆ
2. ಜಮ್ಮು - ಕಾಶ್ಮೀರದ ಅಂತಿಮ ಹಂತದ ವಿಧಾನ ಸಭಾ ಚುನಾವಣೆ -ಮತದಾನ ಪ್ರಗತಿಯಲ್ಲಿ
3. ಪ್ರವಾಹ ಪೀಡಿತ ರಾಜ್ಯಗಳಿಗೆ ಕೇಂದ್ರದಿಂದ ಮುಂಗಡ ನೆರವು ಘೋಷಣೆ
4. ಟೆಸ್ಟ್ ಕ್ರಿಕೆಟ್ - ಕಾನ್ಪುರಲ್ಲಿಂದು ಭಾರತ -ಬಾಂಗ್ಲಾ ನಡುವಿನ ೨ನೇ ಪಂದ್ಯದ ಕೊನೆಯ ದಿನದಾಟ

******

ಜಮ್ಮು ಮತ್ತು ಕಾಶ್ಮೀರದಲ್ಲಿ ವಿಧಾನಸಭಾ ಚುನಾವಣೆಯ ಮೂರನೇ ಮತ್ತು ಅಂತಿಮ ಹಂತದ ಮತದಾನ ಪ್ರಗತಿಯಲ್ಲಿದೆ, ೭ ಜಿಲ್ಲೆಗಳ ನಲವತ್ತು ವಿಧಾನಸಭಾ ಕ್ಷೇತ್ರಗಳಲ್ಲಿ ಸುಗಮ, ಶಾಂತಿಯುತ ಮತ್ತು ಯಾವುದೇ ಅಹಿತಕರ ಘಟನೆ ರಹಿತ ಮತದಾನಕ್ಕಾಗಿ ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಮತದಾನ ಬೆಳಗ್ಗೆ ೭ ಗಂಟೆಗೆ ಆರಂಭವಾಗಿದ್ದು, ಸಂಜೆ ೬ ಗಂಟೆಗೆ ಮುಕ್ತಾಯವಾಗಲಿದೆ. ೨೦ ಸಾವಿರಕ್ಕೂ ಹೆಚ್ಚು ಮತಗಟ್ಟೆ ಸಿಬ್ಬಂದಿಯನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿದ್ದು, ಎಲ್ಲಾ ಮತಗಟ್ಟೆಗಳಲ್ಲಿ ಕನಿಷ್ಠ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಕಾಶ್ಮೀರ ವಿಭಾಗದಲ್ಲಿ ಬಾರಾಮುಲ್ಲಾ, ಕುಪ್ವಾರ ಮತ್ತು ಬಂಡಿಪೋರಾ ಮತ್ತು ಜಮ್ಮು ವಿಭಾಗದಲ್ಲಿ ಜಮ್ಮು, ಉಧಂಪುರ, ಕಥುವಾ ಮತ್ತು ಸಾಂಬಾ ಜಿಲ್ಲೆಗಳ ಏಳು ಜಿಲ್ಲೆಗಳಲ್ಲಿ ಐದು ಸಾವಿರದ ೬೦ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈ ಹಂತದಲ್ಲಿ ೪೧೫ ಅಭ್ಯರ್ಥಿಗಳ ಭವಿಷ್ಯವನ್ನು ೩೯ ಲಕ್ಷಕ್ಕೂ ಹೆಚ್ಚು ಮತದಾರರು ನಿರ್ಧರಿಸಲಿದ್ದಾರೆ. ಮಾಜಿ ಉಪಮುಖ್ಯಮಂತ್ರಿ ಮುಜಾಫರ್ ಹುಸೇನ್ ಬೇಗ್, ಕಾಶ್ಮೀರ ವಿಭಾಗದಲ್ಲಿ ಬಶರತ್ ಬುಖಾರಿ, ಸಜಾದ್ ಗನಿ ಲೋನ್ ಮತ್ತು ನಾಸಿರ್ ಅಸ್ಲಂ ವಾನಿ ಮತ್ತು ಜಮ್ಮು ವಿಭಾಗದಲ್ಲಿ ದೇವಿಂದರ್ ಸಿಂಗ್ ರಾಣಾ, ಚೌಧರಿ ಲಾಲ್ ಸಿಂಗ್ ಮತ್ತು ರಮಣ್ ಭಲ್ಲಾ ಕಣದಲ್ಲಿರುವ ಪ್ರಮುಖ ಅಭ್ಯರ್ಥಿಗಳು. ಕೇಂದ್ರಾಡಳಿತ ಪ್ರದೇಶದಲ್ಲಿ ಮೊದಲ ಎರಡು ಹಂತಗಳಿಗೆ ಸೆಪ್ಟೆಂಬರ್ ೧೮ ಮತ್ತು ೨೫ ರಂದು ಮತದಾನ ನಡೆದಿತ್ತು. ಮೊದಲ ಹಂತದಲ್ಲಿ ಶೇ.೬೧ಕ್ಕೂ ಹೆಚ್ಚು ಹಾಗೂ ಎರಡನೇ ಹಂತದಲ್ಲಿ ಶೇ.೫೭ರಷ್ಟು ಮತದಾನವಾಗಿದೆ. ಎಲ್ಲಾ ಹಂತಗಳ ಮತ ಎಣಿಕೆ ಇದೇ ತಿಂಗಳ ೮ ರಂದು ಹರಿಯಾಣ ಜೊತೆಗೆ ನಡೆಯಲಿದೆ

******

ಪ್ರಧಾನಿ ನರೇಂದ್ರಮೋದಿ ಅವರು ನಿನ್ನೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ಮಾತುಕತೆ ನಡೆಸಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಪ್ರಧಾನಿ, ಭಯೋತ್ಪಾದನೆಗೆ ಜಗತ್ತಿನಲ್ಲಿ ಸ್ಥಾನವಿಲ್ಲ. ಪ್ರಾದೇಶಿಕವಾಗಿ ಭಯೋತ್ಪಾದನೆಯನ್ನು ತಡೆಗಟ್ಟಲು ಹಾಗೂ ಎಲ್ಲಾ ಒತ್ತೆಯಾಳುಗಳ ಸುರಕ್ಷಿತ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳಲು ಇದು ನಿರ್ಣಾಯಕ ಕಾಲವಾಗಿದೆ. ಶಾಂತಿ ಮತ್ತು ಸ್ಥಿರತೆಯ ಮರುಸ್ಥಾಪನೆಯ ಪ್ರಯತ್ನಗಳನ್ನು ಬೆಂಬಲಿಸಲು ಭಾರತ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

******

ದೇಶದಲ್ಲಿ ಆರೋಗ್ಯ ಸೌಲಭ್ಯಗಳನ್ನು ವಿಸ್ತರಿಸಲು ಕೇಂದ್ರ ಸರ್ಕಾರ ನಿರಂತರ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಆಯುಷ್ಮಾನ್ ಭಾರತ್-ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆಯ ಅನುಷ್ಠಾನದಿಂದಾಗಿ, ಮಹಿಳೆಯರಿಗೆ ಆರೋಗ್ಯ ಸೌಲಭ್ಯಗಳು ಹೆಚ್ಚಾಗಿದೆ ಎಂದು ಅವರು ತಿಳಿಸಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿ ನಿನ್ನೆ ಆಯೋಜಿಸಲಾಗಿದ್ದ, ಡಾ. ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯ ೧೦ನೇ ಘಟಿಕೋತ್ಸವ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು. ದೃಢವಾದ ಆರೋಗ್ಯ ವ್ಯವಸ್ಥೆ ನಿರ್ಮಿಸಲು ಕಳೆದ ಹತ್ತು ವರ್ಷಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಶ್ಲಾಘಿಸಿದ ಅವರು, ವೈದ್ಯಕೀಯ ಕಾಲೇಜುಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿದೆ, ಎಂಬಿಬಿಎಸ್ ಮತ್ತು ಪಿಜಿ ಸೀಟುಗಳ ಸಂಖ್ಯೆಯೂ ದ್ವಿಗುಣಗೊಂಡಿದೆ ಎಂದರು. ಸರ್ಕಾರದ ಕ್ರಮಗಳಿಂದಾಗಿ ಮುಂದಿನ ವರ್ಷಗಳಲ್ಲಿ ಗುಣಮಟ್ಟದ ಆರೋಗ್ಯ ಸೌಲಭ್ಯಗಳು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಾಗಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ವೈದ್ಯರೊಂದಿಗೆ ಅನುಚಿತವಾಗಿ ವರ್ತಿಸಿದ ಅಹಿತಕರ ಘಟನೆಯನ್ನು ಪ್ರಸ್ತಾಪಿಸಿದ ರಾಷ್ಟ್ರಪತಿ, ವೈದ್ಯರು ರೋಗಿಗಳ ಜೀವ ಉಳಿಸಲು ಎಲ್ಲಾ ಪ್ರಯತ್ನಗಳನ್ನು ಮಾಡುತ್ತಾರೆ ಎಂಬುದನ್ನು ಪ್ರತಿಯೊಬ್ಬರೂ ಅರ್ಥಮಾಡಿಕೊಳ್ಳಬೇಕು. ವೈದ್ಯರು ಮತ್ತು ಆಸ್ಪತ್ರೆ ಸಿಬ್ಬಂದಿಯೊಂದಿಗೆ ಅನುಚಿತವಾಗಿ ವರ್ತಿಸಬಾರದು ಎಂದು ಒತ್ತಿ ಹೇಳಿದರು.

******

ಕೇಂದ್ರ ಆರೋಗ್ಯ ಸಚಿವಾಲಯ ಮಾರಣಾಂತಿಕವಾಗಿ ಅಸ್ವಸ್ಥರಾಗಿರುವ ರೋಗಿಗಳಲ್ಲಿ ಜೀವ ಬೆಂಬಲವನ್ನು ಹಿಂತೆಗೆದುಕೊಳ್ಳುವ ಷರತ್ತುಗಳನ್ನು ವಿವರಿಸುವ ಕರಡು ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಸಾರ್ವಜನಿಕ ಅಭಿಪ್ರಾಯಗಳಿಗಾಗಿ ಕರಡು ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲಾಗಿದೆ. ಟರ್ಮಿನಲ್ ಅನಾರೋಗ್ಯವನ್ನು, ಬದಲಾಯಿಸಲಾಗದ ಅಥವಾ ಗುಣಪಡಿಸಲಾಗದ ಸ್ಥಿತಿ ಎಂದು ವ್ಯಾಖ್ಯಾನಿಸಲಾಗಿದೆ. ೭೨ ಗಂಟೆಗಳ ನಂತರ ಯಾವುದೇ ಚೇತರಿಕೆಯಿಲ್ಲದ, ತೀವ್ರವಾದ

ಮಿದುಳಿನ ಗಾಯಗಳನ್ನು ಈ ವರ್ಗಕ್ಕೆ ಸೇರಿಸಲಾಗಿದೆ. ಚಿಕಿತ್ಸೆಯಿಂದ ಯಾವುದೇ ಪ್ರಯೋಜನವಿಲ್ಲದ ಅಥವಾ ಅವರ ಕುಟುಂಬದಿಂದ ದಾಖಲಿತ ತಿಳಿವಳಿಕೆಯುಳ್ಳ ನಿರಾಕರಣೆ ಸೇರಿದಂತೆ ಹಲವಾರು ಅಂಶಗಳ ಆಧಾರದ ಮೇಲೆ ಅದರ ಬಗ್ಗೆ ಪರಿಗಣಿಸಲಾದ ನಿರ್ಧಾರ ತೆಗೆದುಕೊಳ್ಳಲು ವೈದ್ಯರಿಗೆ ಸಲಹೆ ನೀಡಲಾಗುತ್ತದೆ. ತೀವ್ರ ನಿಗಾ ಘಟಕಗಳಲ್ಲಿ ಅನೇಕ ರೋಗಿಗಳು ಮಾರಣಾಂತಿಕವಾಗಿ ಅಸ್ವಸ್ಥರಾಗಿದ್ದಾರೆ ಮತ್ತು ಜೀವಾಧಾರಕ ಚಿಕಿತ್ಸೆಗಳಿಂದ ಲಾಭವನ್ನು ನಿರೀಕ್ಷಿಸಲಾಗುವುದಿಲ್ಲ ಎನ್ನುವುದನ್ನು ಸಚಿವಾಲಯ ಒತ್ತಿ ಹೇಳಿದೆ. ಅಂತಹ ಸಂದರ್ಭಗಳಲ್ಲಿ, ಎಸ್ಎಸ್‌ಟಿ ಪ್ರಯೋಜನಕಾರಿಯಲ್ಲ ಮತ್ತು ರೋಗಿಗಳಿಗೆ ಸಂಕಟಗಳನ್ನು ಹೆಚ್ಚಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಈ ವಿಧಾನವನ್ನು ವಿಶ್ವಾದ್ಯಂತ ಪ್ರಮಾಣಿತ ಐಸಿಯು ಆರೈಕೆ ಎಂದು ಪರಿಗಣಿಸಲಾಗಿದೆ ಮತ್ತು ಹಲವಾರು ನ್ಯಾಯವ್ಯಾಪ್ತಿಗಳಿಂದ ಎತ್ತಿಹಿಡಿಯಲಾಗಿದೆ. ಅಂತಹ ನಿರ್ಧಾರಗಳು ವೈದ್ಯಕೀಯ, ನೈತಿಕ ಮತ್ತು ಕಾನೂನು ಪರಿಗಣನೆಗಳನ್ನು ಹೊಂದಿವೆ ಎಂದು ಸಚಿವಾಲಯ ತಿಳಿಸಿದೆ.

******

ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿ-ಎನ್‌ಡಿಆರ್‌ಎಫ್‌ನಿಂದ ಪ್ರವಾಹ ಪೀಡಿತ ರಾಜ್ಯಗಳಾದ ಗುಜರಾತ್, ಮಣಿಪುರ ಮತ್ತು ತ್ರಿಪುರಾಗಳಿಗೆ ಮುಂಗಡವಾಗಿ ೬೭೫ ಕೋಟಿ ರೂಪಾಯಿ ಬಿಡುಗಡೆ ಮಾಡಲು ಕೇಂದ್ರ ಅನುಮೋದನೆ ನೀಡಿದೆ. ಗುಜರಾತ್‌ಗೆ ೬೦೦ ಕೋಟಿ ರೂಪಾಯಿ, ಮಣಿಪುರಕ್ಕೆ ೫೦ ಕೋಟಿ ರೂಪಾಯಿ ಮತ್ತು ತ್ರಿಪುರಾಕ್ಕೆ ೨೫ ಕೋಟಿ ರೂಪಾಯಿ ಮಂಜೂರು ಮಾಡಲಾಗಿದೆ. ಈ ವರ್ಷ ನೈಋತ್ಯ ಮಾನ್ಸೂನ್ ಸಮಯದಲ್ಲಿ ಅತಿ ಹೆಚ್ಚು ಮಳೆ, ಪ್ರವಾಹ ಮತ್ತು ಭೂಕುಸಿತದಿಂದ ಈ ರಾಜ್ಯಗಳು ಬಾಧಿತವಾಗಿವೆ. ಪ್ರವಾಹ ಪೀಡಿತ ರಾಜ್ಯಗಳಿಗೆ ಸಾಧ್ಯವಿರುವ ಎಲ್ಲ ನೆರವು ನೀಡಲು ಕೇಂದ್ರ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಗೃಹ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಈ ವರ್ಷದಲ್ಲಿ ಅಸ್ಸಾಂ, ಮಿಜೋರಾಂ, ಕೇರಳ, ತ್ರಿಪುರಾ, ನಾಗಾಲ್ಯಾಂಡ್, ಗುಜರಾತ್, ಆಂಧ್ರಪ್ರದೇಶ, ತೆಲಂಗಾಣ ಮತ್ತು ಮಣಿಪುರದಲ್ಲಿ ಅತಿ ಹೆಚ್ಚು ಮಳೆ, ಪ್ರವಾಹ ಮತ್ತು ಭೂಕುಸಿತದಿಂದಾಗಿ ಹಾನಿಯಾಗಿದೆ ಎಂದು ಸಚಿವಾಲಯ ತಿಳಿಸಿದೆ. ಹಾನಿಯ ಸ್ಥಳದಲ್ಲೇ ಮೌಲ್ಯಮಾಪನ ಮಾಡಲು ಈ ಎಲ್ಲಾ ರಾಜ್ಯಗಳಲ್ಲಿ ಅಂತರ-ಸಚಿವಾಲಯದ ಕೇಂದ್ರ ತಂಡಗಳನ್ನು ನಿಯೋಜಿಸಲಾಗಿದ್ದು, ಆ ತಂಡಗಳ ವರದಿಯ ಸ್ವೀಕೃತಿಯ ನಂತರ, ಉಳಿದ ರಾಜ್ಯಗಳಿಗೆ ಹೆಚ್ಚುವರಿ ಆರ್ಥಿಕ ಸಹಾಯ ನೀಡುವ ಕುರಿತು ನಿರ್ಧರಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.

******

ಪ್ರಧಾನಿ ನರೇಂದ್ರಮೋದಿ ನೇತೃತ್ವ ಸರ್ಕಾರದ ಮೊದಲ ೧೦೦ ದಿನಗಳಲ್ಲಿ ನಗರ ಮೂಲಸೌಕರ್ಯ ಮತ್ತು ವಸತಿ ಭೂದೃಶ್ಯವನ್ನು ಸುಧಾರಿಸಲು ಸರ್ಕಾರು ಪ್ರಮುಖ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಹೇಳಿದ್ದಾರೆ. ನಿನ್ನೆ ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಪ್ರಧಾನ ಮಂತ್ರಿ ಆವಾಸ್ ಯೋಜನೆ-ಅರ್ಬನ್ ೨.೦ ಗೆ ಸರ್ಕಾರ ಅನುಮೋದನೆ ನೀಡಿದ್ದು, ನಗರ ಪ್ರದೇಶಗಳಲ್ಲಿನ ಒಂದು ಕೋಟಿ

ನಗರ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಎರಡು ಹೂಡಿಕೆಯೊಂದಿಗೆ ಆರ್ಥಿಕ ನೆರವು ನೀಡಲು ಸರ್ಕಾರ ಅನುಮೋದನೆ ನೀಡಿದೆ ಎಂದರು. ಕಳೆದ ಹತ್ತು ವರ್ಷಗಳಲ್ಲಿ ದೇಶದ ೨೧ ನಗರಗಳಿಗೆ ಮೆಟ್ರೋ ಸೇವೆಯನ್ನು ವಿಸ್ತರಿಸಲಾಗಿದೆ ೭೦೦ ಕಿಲೋಮೀಟರ್‌ಗಳ ಹೊಸ ಮೆಟ್ರೋ ಮಾರ್ಗಗಳನ್ನು ಕಾರ್ಯಗತಗೊಳಿಸಲಾಗಿದೆ, ಒಟ್ಟು ಕಾರ್ಯಾಚರಣೆಯ ಉದ್ದವನ್ನು ೯೪೫ ಕಿಲೋಮೀಟರ್‌ಗೆ ತರಲಾಗಿದೆ ಎಂದು ಅವರು ಹೇಳಿದರು. ನಗರ ಮೂಲಸೌಕರ್ಯ ಯೋಜನೆಗಳಿಗೆ ಸಂಬಂಧಿಸಿದ ಯೋಜನೆಗಳಲ್ಲಿ ಎಂಟು ಲಕ್ಷ ಕೋಟಿ ರೂಪಾಯಿಗಳ ಹೂಡಿಕೆಗಳ ಬಗ್ಗೆ ಅವರು ಪ್ರಸ್ತಾಪಿ ಸಿದರು. ೨೦೦೪ ರಿಂದ ೨೦೧೪ ರ ಅವಧಿಯಲ್ಲಿ ಹೂಡಿಕೆ ೨೧ ಪಟ್ಟು ಹೆಚ್ಚಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಚಿವರು ಸ್ವಚ್ಛತಾ ಹಿ ಸೇವಾ ೨೦೨೪ ರ ತರಬೇತಿ ಘಟಕವನ್ನು ಉದ್ಘಾಟಿಸಿದರು.

******

ನಾಗಾಲ್ಯಾಂಡ್‌ನಲ್ಲಿ, ನಾಗಾ ಹಾಸ್ಪಿಟಲ್ ಅಥಾರಿಟಿ ಕೊಹಿಮಾ ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಅಡಿಯಲ್ಲಿ ಕೊಹಿಮಾ ಜಿಲ್ಲೆಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆ ಎಂದು ಗುರುತಿಸಲ್ಪಟ್ಟಿದೆ. ಕೊಹಿಮಾದಲ್ಲಿ - ಪಿಎಂಜೆಎವೈ ನ ೬ ನೇ ವಾರ್ಷಿಕೋತ್ಸವ ಮತ್ತು ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್‌ನ ೩ ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಕಾರ್ಯಕ್ರಮದ ಸಂದರ್ಭದಲ್ಲಿ ಈ ಮಾನ್ಯತೆ ನೀಡಲಾಯಿತು.ಕಾರ್ಯಕ್ರಮದಲ್ಲಿ ಮಾತನಾಡಿದ ಕೊಹಿಮಾದ ಹೆಚ್ಚುವರಿ ಡೆಪ್ಯುಟಿ ಕಮಿಷನರ್, ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ (ಪಿಎಂಜೆಎವೈ) ಮತ್ತು ಅದರ ಘಟಕಗಳು, ಆರೋಗ್ಯ ಸೇವೆಗಳನ್ನು ಪ್ರವೇಶಿಸುವಲ್ಲಿ ಯಾರೂ ಹಿಂದುಳಿದಿಲ್ಲ ಎಂದು ಖಚಿತಪಡಿಸಿಕೊಳ್ಳುವ ಮೂಲಕ ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಪೂರೈಸುವ ಗುರಿಯನ್ನು ಹೊಂದಿದೆ.

******

ಕೇಂದ್ರ ಸರ್ಕಾರದ ಪ್ರಮುಖ ಉಪಕ್ರಮ ಇನ್ನೋವೇಶನ್ಸ್ ಫಾರ್ ಡಿಫೆನ್ಸ್ ಎಕ್ಸಲೆನ್ಸ್ ಮೂಲಕ ಭಾರತೀಯ ಸೇನೆಯು ಎಂಟನೇ ಸಂಗ್ರಹಣೆ ಒಪ್ಪಂದಕ್ಕೆ ಸಹಿ ಹಾಕಿದೆ. ನವದೆಹಲಿಯಲ್ಲಿ ರಕ್ಷಣಾ ಸಚಿವಾಲಯದ ಪ್ರಕಾರ, ಕ್ವಾಂಟಮ್ ಸೆಕ್ಯೂರ್ ಕೀ ಉತ್ಪಾದನೆಯ ಒಪ್ಪಂದಕ್ಕೆ ನಿನ್ನೆ ಸೇನಾ ಸಿಬ್ಬಂದಿಯ ವೈಸ್ ಚೀಫ್ ಲೆಫ್ಟಿನೆಂಟ್ ಜನರಲ್ ಎನ್‌ಸಿ ರಾಜಾ ಸುಬ್ರಮಣಿ ಅವರ ಸಮ್ಮುಖದಲ್ಲಿ ಕ್ಯುನು ಲ್ಯಾಬ್ಸ್‌ನೊಂದಿಗೆ ಸಹಿ ಹಾಕಲಾಯಿತು.

******

ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳನ್ನು ಉಲ್ಲೇಖಿಸಿ ದೆಹಲಿ ಪೊಲೀಸರು ಶನಿವಾರದವರೆಗೆ ರಾಷ್ಟ್ರೀಯ ರಾಜಧಾನಿ ದೆಹಲಿಯ ಮೂರು ಜಿಲ್ಲೆಗಳು ಮತ್ತು ಗಡಿ ಪ್ರದೇಶಗಳಲ್ಲಿ ಐದು ಅಥವಾ

ಅದಕ್ಕಿಂತ ಹೆಚ್ಚು ಅನಧಿಕೃತ ವ್ಯಕ್ತಿಗಳ ಪ್ರತಿಭಟನೆ ಮತ್ತು ಸಭೆಯನ್ನು ನಿಷೇಧಿಸಿದ್ದಾರೆ. ಮಧ್ಯ ದೆಹಲಿ, ನವದೆಹಲಿ ಮತ್ತು ಉತ್ತರ ದೆಹಲಿಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

*****

ಭಾರತ-ಬಾಂಗ್ಲಾದೇಶದ ನಡುವೆ ಕಾನ್ಪುರದಲ್ಲಿ ನಡೆಯುತ್ತಿರುವ ಟೆಸ್ಟ್ ಕ್ರಿಕೆಟ್‌ನಲ್ಲಿ, ಕೊನೆಯ ದಿನವಾದ ಇಂದು ಬಾಂಗ್ಲಾ ತನ್ನ ಎರಡನೇ ಇನ್ನಿಂಗ್ಸ್ ಅನ್ನು ಪುನರಾರಂಭಿಸಲಿದೆ. ನಿನ್ನೆ ದಿನದಾಂತ್ಯಕ್ಕೆ ೨ ವಿಕೆಟ್‌ಗೆ ೨೬ ರನ್‌ಗಳೊಂದಿಗೆ ಮೊಮಿನುಲ್ ಹಕ್ ಮತ್ತು ಶದ್ಮನ್ ಇಸ್ಲಾಂ ಕ್ರೀಸ್‌ನಲ್ಲಿದ್ದರು. ಭಾರತದ ಪರ ಅಶ್ವಿನ್ ಎರಡೂ ವಿಕೆಟ್ ಪಡೆದರು. ಇದಕ್ಕೂ ಮೊದಲು ನಾಲ್ಕನೇ ದಿನದಾಟದಲ್ಲಿ ಆತಿಥೇಯರು ೫೨ ರನ್‌ಗಳ ಮುನ್ನಡೆ ಪಡೆದು, ೯ ವಿಕೆಟ್ ನಷ್ಟಕ್ಕೆ ೨೮೫ ರನ್ ಗಳಿಸಿ, ಮೊದಲ ಇನಿಂಗ್ಸ್ ಡಿಕ್ಲೇರ್ ಮಾಡಿಕೊಂಡರು. ಭಾರತ ತಂಡ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಅತ್ಯಂತ ವೇಗವಾಗಿ ೫೦, ೧೦೦, ೧೫೦, ೨೦೦ ಮತ್ತು ೨೫೦ ರನ್‌ಗಳನ್ನು ದಾಖಲಿಸಿದೆ.

******